# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:08ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೆಯ ಪಟ್ಟಿ

## 02. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಶರಣಗೌಡ ಬಯ್ಯಾಪುರ** ಅವರು ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ತಾಲ್ಲೂಕುಗಳಲ್ಲಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು ಖಾಲಿಯಿರುವುದರಿಂದ ಗ್ರಾಮೀಣ ಮಟ್ಟದ ಕೆಲಸಗಳು ಕುಂಠಿತವಾಗಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

02. **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ಕೋಲಾರ ಜಿಲ್ಲೆಯ ಮುಳಬಾಗಿಲು ತಾಲ್ಲೂಕಿನ ಗೋಗುಂಠೆ ಗ್ರಾಮದ ಕ್ರೈಸ್ತ ಸಮುದಾಯದ **"ರಕ್ಷಣಾಗಿರಿ ಪುಣ್ಯಸ್ಥಳ"**ವನ್ನು ಧ್ವಂಸ ಮಾಡಿ ಕ್ರೈಸ್ತ ಸಮುದಾಯದ ಧರ್ಮ ಗುರುಗಳ ಮೇಲೆ ದೌರ್ಜನ್ಯ ನಡೆದಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

03. **ಶ್ರೀ ಗೋವಿಂದರಾಜು** ಅವರು ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ಸಿಂಪಡಿಸುವ ಕೀಟನಾಶಕ ಔಷಧಿ ಗುಣಮಟ್ಟವನ್ನು ಪರೀಕ್ಷಿಸಲು ಸರ್ಕಾರದ ವತಿಯಿಂದ ಪ್ರಯೋಗಾಲಯ ಮತ್ತು ಔಷಧ ನಿಯಂತ್ರಣ ಮಂಡಳಿಯನ್ನು ಸ್ಥಾಪಿಸುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

## 03. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ;- ಸುನೀಲ್‌ಗೌಡ ಪಾಟೀಲ್, ಸಲೀಂ ಅಹಮದ್, ಡಿ.ಎಸ್. ಅರುಣ್ ಮತ್ತು ಚನ್ನರಾಜ್ ಬಸವರಾಜ್ ಹಟ್ಟಿಹೊಳಿ** ಅವರುಗಳು ಸ್ಥಳೀಯ ಸಂಸ್ಥೆಗಳ ಚುನಾಯಿತ ಸದಸ್ಯರ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಸಿಬ್ಬಂದಿಗಳ ಗೌರವಧನ ಹೆಚ್ಚಳ ಮಾಡುವ ಹಾಗೂ ಕೇರಳ ಮಾದರಿಯ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

02. **ಡಾ:ಕೆ.ಗೋವಿಂದರಾಜು** ಅವರು ರಾಜ್ಯದ ಕ್ರೀಡಾಪಟುಗಳ ಸರ್ವತೋಮುಖ ಬೆಳವಣಿಗೆಗಾಗಿ ಪ್ರತಿ ಸಾಲಿನ ಆಯವ್ಯಯದಲ್ಲಿ ಹೆಚ್ಚಿನ ಅನುದಾನ ನೀಡುವುದು ಹಾಗೂ ವಲಯವಾರು ಮಟ್ಟದಲ್ಲಿ ಹೆಚ್ಚಿನ ಅನುದಾನ ಒದಗಿಸುವ ಕುರಿತು ಪ್ರಸ್ತಾಪಿಸುವುದು.

2..

೦೩. **ಶ್ರೀ ದಿನೇಶ್ ಗೂಳಿಗೌಡ** ಅವರು 2018-19ನೇ ಸಾಲಿನಲ್ಲಿ MSP ಯೋಜನೆಗೆ ಅಕ್ಕಿ ಗಿರಣಿ ಮಾಲೀಕರು ಸಂಗ್ರಹಣಾ ಸಂಸ್ಥೆಗೆ ಭದ್ರತೆಗಾಗಿ ತಗಲುವ ಮುದ್ರಾಂಕ ಶುಲ್ಕದಲ್ಲಿ ಶೇಕಡ 50% ಹಾಗೂ ನೋಂದಣಿ ಶುಲ್ಕದಲ್ಲಿ ಪೂರ್ಣ ಪ್ರಮಾಣದ ವಿನಾಯಿತಿ ನೀಡಿರುವುದನ್ನು ಪ್ರಸಕ್ತ ಸಾಲಿಗೂ ಮುಂದುವರೆಸುವ ಕುರಿತು ಪ್ರಸ್ತಾಪಿಸುವುದು.

## 04. ಅರ್ಧ ಗಂಟೆ ಕಾಲಾವಧಿ ಚರ್ಚೆ

ಮೈಸೂರು ಲ್ಯಾಂಪ್ಸ್ ಕಾರ್ಖಾನೆಯ ಜಾಗದಲ್ಲಿ ವಸ್ತು ಸಂಗ್ರಹಾಲಯ ನಿರ್ಮಿಸುತ್ತಿರುವ ಕುರಿತು ದಿನಾಂಕ:15.02.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:09 (76)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಟಿ.ಶ್ರೀಕಂಠೇಗೌಡ, ಶ್ರೀ ಕೆ.ಎ.ತಿಪ್ಪೇಸ್ವಾಮಿ ಮತ್ತು ಶ್ರೀ ಎಸ್.ಎಲ್.ಭೋಜೇಗೌಡ** ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ;- ಕೆ.ಎ. ತಿಪ್ಪೇಸ್ವಾಮಿ, ಮರಿತಿಬ್ಬೇಗೌಡ ಮತ್ತು ಕೆ.ಟಿ. ಶ್ರೀಕಂಠೇಗೌಡ ಅವರುಗಳು** | ಭಾರತೀಯ ಆಡಳಿತ ಸೇವಾ ನಿಯಮಗಳು (ವೃಂದ) 1954ಗಳಿಗೆ ಪ್ರಸ್ತಾಪಿಸಿರುವ ತಿದ್ದುಪಡಿಯಲ್ಲಿ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳ ಸಹಮತಿ ಇಲ್ಲದಿದ್ದರೂ ಅಧಿಕಾರಿಗಳನ್ನು ಹುದ್ದೆಗಳಿಂದ ಬಿಡುಗಡೆ ಮಾಡಿ ಕೇಂದ್ರ ಸರ್ಕಾರದ ಸೇವೆ ಸಲ್ಲಿಸಬೇಕೆಂಬ ನಿಬಂಧನೆ ತಂದಿರುವ ಕುರಿತು |

## 06. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**